**Akashvani : Bangalore**
**National Bulletin In Kannada**
**24.10.2024 / 1.10 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

**೧. ಒಡಿಶಾ ಕರಾವಳಿಗೆ ಇಂದು ರಾತ್ರಿ ಅಥವಾ ನಾಳೆ ಪ್ರಬಲ ಚಂಡಮಾರುತ ಡಾನಾ ಅಪ್ಪಳಿಸುವ ಸಾಧ್ಯತೆ, ಹವಾಮಾನ ಇಲಾಖೆ ಮುನ್ಸೂಚನೆ**

**೨. ದೆಹಲಿಯಲ್ಲಿ ಇಂದು ಚಾಣಕ್ಯ ರಕ್ಷಣಾ ಸಂವಾದದ ೨ನೇ ಆವೃತ್ತಿಗೆ ಸಚಿವ ರಾಜನಾಥ್ ಸಿಂಗ್ ಚಾಲನೆ**

**೩. ಜರ್ಮನ್ ಚಾನ್ಸಲರ್ ಓಲಾಫ್ ಶೋಲ್ಜ್ ೭ನೇ ಅಂತರ್ ಸರ್ಕಾರಿ ಸಮಾಲೋಚನೆಗಾಗಿ ಇಂದಿನಿಂದ ೩ ದಿನ ಭಾರತ ಪ್ರವಾಸ**

**೪. ಪುಣೆಯಲ್ಲಿ ಭಾರತ - ನ್ಯೂಜಿಲೆಂಡ್ ನಡುವಿನ ದ್ವಿತೀಯ ಟೆಸ್ಟ್ ಕ್ರಿಕೆಟ್ ಆರಂಭ, ಭೋಜನಾ ವೇಳೆಗೆ ಪ್ರವಾಸಿ ತಂಡ ೨ ವಿಕೆಟ್ ಗೆ ೯೨ ರನ್ ಗಳಿಕೆ**

**<><*<><>*><>**

ಪೂರ್ವ-ಮಧ್ಯ ಬಂಗಾಳ ಕೊಲ್ಲಿಯಲ್ಲಿ ರೂಪುಗೊಂಡ ಪ್ರಬಲ ಚಂಡಮಾರುತ 'ಡಾನಾ' ಒಡಿಶಾ ಕರಾವಳಿಯ ಭಿತರ್ಕನಿಕಾ ಮತ್ತು ಧಮ್ರಾ ನಡುವೆ ಇಂದು ತಡರಾತ್ರಿ ಅಥವಾ ನಾಳೆ ಮುಂಜಾನೆ ಅಪ್ಪಳಿಸುವ ಸಾಧ್ಯತೆ ಇದೆ. ಭಾರತೀಯ ಹವಾಮಾನ ಇಲಾಖೆ, 'ಡಾನಾ' ಅಪ್ಪಳಿಸುವ ವೇಳೆ ಗಂಟೆಗೆ ೧೦೦ ರಿಂದ ೧೨೦ ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸಲಿದೆ ಎಂದು ಮುನ್ಸೂಚನೆ ನೀಡಿದೆ. ಪ್ರಬಲ ಚಂಡಮಾರುತವು ಪಾರಾದೀಪ್ ನಿಂದ ೪೨೦ ಕಿ.ಮೀ ಮತ್ತು ಒಡಿಶಾ ಕರಾವಳಿಯ ಧಮ್ರಾದಿಂದ ೪೫೦ ಕಿಲೋಮೀಟರ್ ಮತ್ತು ಪಶ್ಚಿಮ ಬಂಗಾಳ ಕರಾವಳಿಯ ಸಾಗರ್ ದ್ವೀಪದಿಂದ ೫೦೦ ಕಿಲೋಮೀಟರ್ ದೂರದಲ್ಲಿದೆ ಮತ್ತು ಇದು ಬಂಗಾಳ ಕೊಲ್ಲಿಯಲ್ಲಿ ಗಂಟೆಗೆ ೧೨ ಕಿಲೋಮೀಟರ್ ವೇಗದಲ್ಲಿ ಚಲಿಸುತ್ತಿದೆ ಎಂದು ಇಲಾಖೆ ಹೇಳಿದೆ. ಭುವನೇಶ್ವರದ ಬಿಜು ಪಟ್ನಾಯಕ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಹೊರಡುವ ಮತ್ತು ಹೋಗುವ ಎಲ್ಲಾ ವಿಮಾನ ಸೇವೆಗಳನ್ನು ಇಂದು ಸಂಜೆ ೫ ರಿಂದ ನಾಳೆ ಬೆಳಗ್ಗೆ ೯ ಗಂಟೆಯವರೆಗೆ ರದ್ದುಗೊಳಿಸಲಾಗಿದೆ. ಕರಾವಳಿ ಪ್ರದೇಶದ ತಗ್ಗು ಪ್ರದೇಶಗಳಲ್ಲಿ ವಾಸಿಸುವ ಜನರನ್ನು ಸುರಕ್ಷಿತಾ ಕೇಂದ್ರಗಳಿಗೆ ಸ್ಥಳಾಂತರಿಸಲಾಗುತ್ತಿದೆ. ಎಲ್ಲಾ ಶಾಲೆಗಳು, ಕಾಲೇಜುಗಳು, ವಿಶ್ವವಿದ್ಯಾಲಯಗಳು ಮತ್ತು ಅನೇಕ ಸರ್ಕಾರಿ ಸಂಸ್ಥೆಗಳಗೆ ನಾಳೆಯವರೆಗೆ ರಜೆ ಘೋಷಿಸಲಾಗಿದೆ.

**<><*<><>*><>**

ಡಾನಾ ಚಂಡಮಾರುತದಿಂದ ಉಂಟಾಗಲಿರುವ ಭೂಕುಸಿತಕ್ಕೆ ಮುನ್ನ ಜೀವಗಳು ಮತ್ತು ಆಸ್ತಿಪಾಸ್ತಿ ನಷ್ಟವನ್ನು ರಕ್ಷಿಸಲು ಭಾರತೀಯ ಕರಾವಳಿ ಪಡೆ ಸರಣಿ ಅಪಾಯ ತಡೆಗಟ್ಟುವ ಕ್ರಮಗಳನ್ನು ಜಾರಿಗೆ ತಂದಿದೆ. ಐಸಿಜಿಯು ಪರಿಸ್ಥಿತಿಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದೆ ಮತ್ತು ಚಂಡಮಾರುತದ ಪರಿಣಾಮದಿಂದ ಉದ್ಭವಿಸುವ ಯಾವುದೇ ತುರ್ತು ಪರಿಸ್ಥಿತಿಯನ್ನು ಎದುರಿಸಲು ಸನ್ನದ್ಧತೆಯನ್ನು ಖಚಿತಪಡಿಸಿಕೊಳ್ಳಲು ಪೂರ್ವಭಾವಿ ಕ್ರಮಗಳನ್ನು ಕೈಗೊಂಡಿದೆ. ಮೀನುಗಾರರು ಮತ್ತು ನಾವಿಕರಿಗೆ ನಿಯಮಿತ ಹವಾಮಾನ ಎಚ್ಚರಿಕೆಗಳು ಮತ್ತು ಸುರಕ್ಷತಾ ಸಲಹೆಗಳನ್ನು ಪ್ರಸಾರ ಮಾಡಲು ಐಸಿಜಿ ಪಶ್ಚಿಮ ಬಂಗಾಳ ಮತ್ತು ಒಡಿಶಾದ ಹಡಗುಗಳು, ವಿಮಾನಗಳು ಮತ್ತು ರಿಮೋಟ್ ಆಪರೇಟಿಂಗ್ ಸ್ಟೇಷನ್ ಗಳನ್ನು ನಿಯೋಜಿಸಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

**<><*<><>*><>**

ರಕ್ಷಣಾ ಸಚಿವ ರಾಜನಾಥ್ ಸಿಂಗ್, ದೆಹಲಿಯಲ್ಲಿ ಇಂದು ಚಾಣಕ್ಯ ರಕ್ಷಣಾ ಸಂವಾದದ ಎರಡನೇ ಆವೃತ್ತಿಯನ್ನು ಉದ್ಘಾಟಿಸಲಿದ್ದಾರೆ. ಸಚಿವರು ಭಾರತೀಯ ಸೇನೆಯ ಹಸಿರು ಉಪಕ್ರಮ ೧.೦ ಮತ್ತು ಐಎ ೧.೦ ಡಿಜಿಟಲೀಕರಣಕ್ಕೆ ಚಾಲನೆ ನೀಡಲಿದ್ದಾರೆ. ವಿಕಸಿತ ಭಾರತ @೨೦೪೭ ಅನ್ನು ಸಾಧಿಸುವಲ್ಲಿ ಸಮಗ್ರ

ಭದ್ರತೆಯ ಮಹತ್ವವನ್ನು ಒತ್ತಿಹೇಳುವ 'ಅಭಿವೃದ್ಧಿ ಮತ್ತು ಭದ್ರತೆಗಾಗಿ ಭಾರತದ ದೃಷ್ಟಿಕೋನ' ಕುರಿತು ಸಚಿವರು ದಿಕ್ಸೂಚಿ ಭಾಷಣವನ್ನು ಮಾಡಲಿದ್ದಾರೆ. ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ಸಭಿಕರನ್ನುದ್ದೇಶಿಸಿ ಮಾತನಾಡಲಿದ್ದು, ಆತ್ಮನಿರ್ಭರ ಭಾರತ್ ಗೆ ಸಂಬಂಧಿಸಿದ ಉಪಕ್ರಮಗಳು ಸೇರಿದಂತೆ ರಾಷ್ಟ್ರ ನಿರ್ಮಾಣಕ್ಕೆ ಭಾರತೀಯ ಸೇನೆಯ ಮಹತ್ವದ ಕೊಡುಗೆಗಳನ್ನು ಬಿಂಬಿಸಲಿದ್ದಾರೆ. ಎರಡು ದಿನಗಳ ಈ ಕಾರ್ಯಕ್ರಮವು ನೀತಿ ನಿರೂಪಕರು, ಕಾರ್ಯತಂತ್ರದ ಚಿಂತಕರು, ಶಿಕ್ಷಣ ತಜ್ಞರು, ರಕ್ಷಣಾ ಸಿಬ್ಬಂದಿ, ಅನುಭವಿಗಳು ಮತ್ತು ವಿಜ್ಞಾನಿಗಳನ್ನು ಒಟ್ಟುಗೂಡಿಸುತ್ತದೆ.

<><*<><>*><>

ಜರ್ಮನ್ ಚಾನ್ಸಲರ್ ಓಲಾಫ್ ಶೋಲ್ಜ್ ಅವರು ೭ ನೇ ಅಂತರ್ ಸರ್ಕಾರಿ ಸಮಾಲೋಚನೆಗಾಗಿ ಇಂದಿನಿಂದ ಮೂರು ದಿನಗಳ ಭಾರತ ಪ್ರವಾಸದಲ್ಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಚಾನ್ಸಲರ್ ಶೋಲ್ಜ್ ಅವರು ನಾಳೆ ಅಂತರ್ ಸರ್ಕಾರಿ ಸಮಾಲೋಚನೆಗಳ ಸಹ ಅಧ್ಯಕ್ಷತೆ ವಹಿಸಲಿದ್ದಾರೆ. ಐಜಿಸಿ ಒಂದು ಸಂಪೂರ್ಣ ಸರ್ಕಾರಿ ಚೌಕಟ್ಟಾಗಿದ್ದು, ಇದರ ಅಡಿಯಲ್ಲಿ ಎರಡೂ ಕಡೆಯ ಸಚಿವರು ತಮ್ಮ ಜವಾಬ್ದಾರಿಯ ಕ್ಷೇತ್ರಗಳಲ್ಲಿ ಚರ್ಚೆಗಳನ್ನು ನಡೆಸಲಿದ್ದಾರೆ ಮತ್ತು ತಮ್ಮ ಚರ್ಚೆಗಳ ಫಲಿತಾಂಶದ ಬಗ್ಗೆ ಪ್ರಧಾನಿ ಮತ್ತು ಚಾನ್ಸಲರ್ ಅವರಿಗೆ ವರದಿ ಮಾಡಲಿದ್ದಾರೆ. ವರ್ಧಿತ ಭದ್ರತೆ ಮತ್ತು ರಕ್ಷಣಾ ಸಹಕಾರ, ಆಳವಾದ ಆರ್ಥಿಕ ಸಹಕಾರ, ಹಸಿರು ಮತ್ತು ಸುಸ್ಥಿರ ಅಭಿವೃದ್ಧಿ ಪಾಲುದಾರಿಕೆ ಮತ್ತು ಉದಯೋನ್ಮುಖ ಮತ್ತು ಕಾರ್ಯತಂತ್ರದ ತಂತ್ರಜ್ಞಾನಗಳ ಕ್ಷೇತ್ರದಲ್ಲಿನ ಸಹಯೋಗದ ಬಗ್ಗೆ ಚರ್ಚಿಸಲು ಉಭಯ ನಾಯಕರು ನಾಳೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಉಭಯ ನಾಯಕರು ಜರ್ಮನ್ ಬಿಸಿನೆಸ್ ನ ೧೮ನೇ ಏಷ್ಯಾ ಪೆಸಿಫಿಕ್ ಸಮ್ಮೇಳನವನ್ನುದ್ದೇಶಿಸಿ ಮಾತನಾಡಲಿದ್ದಾರೆ ಎಂದು ನಮ್ಮ ವರದಿಗಾರ ವರದಿ ಮಾಡಿದ್ದಾರೆ.

<><*<><>*><>

ರಷ್ಯಾದ ಕಜಾನ್ ನಲ್ಲಿ ನಡೆದ ೧೬ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಿದ ನಂತರ ಪ್ರಧಾನಿ ನರೇಂದ್ರ ಮೋದಿ ನಿನ್ನೆ ರಾತ್ರಿ ನವದೆಹಲಿಗೆ ಹಿಂದಿರುಗಿದರು. ಶೃಂಗಸಭೆಯ ಹೊರತಾಗಿ ಪ್ರಧಾನಿ ಮೋದಿ, ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಹೊಸದಾಗಿ ಆಯ್ಕೆಯಾದ ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯಾನ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಉಜ್ಬೇಕಿಸ್ತಾನದ ಅಧ್ಯಕ್ಷ ಶೌಕತ್ ಮಿರ್ಜಿಯೋಯೆವ್ ಮತ್ತು ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರೊಂದಿಗೂ ಪ್ರಧಾನಿ ದ್ವಿಪಕ್ಷೀಯ ಸಭೆ ನಡೆಸಿದರು.

<><*<><>*><>

ಬೆಂಗಳೂರಿನಲ್ಲಿ ಧಾರಾಕಾರ ಮಳೆಗೆ ಜಲಾವೃತಗೊಂಡ ಹಾಗೂ ಹಾನಿಗೊಳಗಾದ ಪ್ರದೇಶಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕಟ್ಟಡ ಕುಸಿದ ಬಾಬುಸಾಬ್ ಪಾಳ್ಯಕ್ಕೆ ಭೇಟಿ ನೀಡಿದ ಅವರು, ಸ್ಥಳೀಯರಿಂದ ಅಹವಾಲು ಆಲಿಸಿದರು. ಈ ವೇಳೆ ಬಿಬಿಎಂಪಿ ಅಧಿಕಾರಿಗಳು ಸೇರಿದಂತೆ ಹಲವು ಅಧಿಕಾರಿಗಳಿಂದ ಮಾಹಿತಿ ಪಡೆದರು. ಇದೇ ಸಂದರ್ಭದಲ್ಲಿ ಕಾರ್ಮಿಕ ಇಲಾಖೆಯಿಂದ ತಲಾ ಮೂರು ಲಕ್ಷ ರೂಪಾಯಿ ಹಾಗೂ ಬಿಬಿಎಂಪಿ ವತಿಯಿಂದ ೨ ಲಕ್ಷ ರೂಪಾಯಿ ಪರಿಹಾರವನ್ನು ಮೃತರ ಕುಟುಂಬಗಳಿಗೆ ನೀಡಲಾಗುವುದು. ಗಾಯಗೊಂಡವರ ಚಿಕಿತ್ಸಾ ವೆಚ್ಚವನ್ನು ಸಂಪೂರ್ಣವಾಗಿ ಇಲಾಖೆಗಳಿಂದಲೇ ಬರಿಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು. ಬೆಂಗಳೂರಿನಲ್ಲಿ ನಿಯಮ ಬಾಹಿರವಾಗಿ ಹಾಗೂ ಸೂಕ್ತ ಅನುಮತಿ ಪರವಾನಗಿ ಪಡೆಯದೆ, ಕಟ್ಟಡ ನಿರ್ಮಾಣಕ್ಕೆ ಮುಂದಾಗುವವರ ವಿರುದ್ಧ ನಿರ್ಧಾಕ್ಷಣ್ಯ ಕ್ರಮ ಕೈಗೊಳ್ಳಬೇಕು ಹಾಗೂ ವಿಭಾಗೀಯ ಅಧಿಕಾರಿಗೂ ನೋಟಿಸ್ ನೀಡಬೇಕು ಎಂದು ಬಿಬಿಎಂಪಿ ಆಯುಕ್ತ ತುಷಾರ್ ಗಿರಿನಾಥ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದರು.

<><*<><>*><>

ಪಶ್ಚಿಮ ರಾಜ್ಯಗಳ ಎರಡು ದಿನಗಳ ಸಮುದಾಯ ರೆಡಿಯೊ ಸಮ್ಮೇಳನ ರಾಜಸ್ಥಾನದ ಜೈಪುರದಲ್ಲಿ ಇಂದು ಪ್ರಾರಂಭವಾಗಲಿದೆ. ಮಾಹಿತಿ ಮತ್ತು ಪ್ರಸಾರ ಸಚಿವಾಲಯ, ನವದೆಹಲಿಯ ಇಂಡಿಯನ್ ಇನ್ ಸ್ಟಿಟ್ಯೂಟ್ ಆಫ್ ಮಾಸ್ ಕಮ್ಯುನಿಕೇಷನ್ ಸಹಯೋಗದೊಂದಿಗೆ ಇದನ್ನು ಆಯೋಜಿಸಿದೆ. ಭಾರತದಲ್ಲಿ ಸಮುದಾಯ

ರೆಡಿಯೊದ ಇಪ್ಪತ್ತು ವರ್ಷಗಳ ಆಚರಣೆ ಎಂಬುದು ಸಮ್ಮೇಳನದ ಘೋಷವಾಕ್ಯವಾಗಿದೆ. ಮಹಾರಾಷ್ಟ್ರ, ಮಧ್ಯಪ್ರದೇಶ, ಗುಜರಾತ್ ಮತ್ತು ರಾಜಸ್ಥಾನದ ಸಮುದಾಯ ರೆಡಿಯೊ ಕೇಂದ್ರಗಳು ಭಾಗವಹಿಸುತ್ತವೆ. ಸಮ್ಮೇಳನವು ಸಿಆರ್ ಎಸ್ ಗೆ ಸಂಬಂಧಿಸಿದ ವಿಷಯಗಳ ಬಗ್ಗೆಯೂ ಚರ್ಚಿಸುತ್ತದೆ.

<><*<><>*><>

ರಾಜಸ್ಥಾನದ ಒಂದು ವಿಧಾನಸಭಾ ಸ್ಥಾನ ಮತ್ತು ಉತ್ತರ ಪ್ರದೇಶದ ಏಳು ವಿಧಾನಸಭಾ ಸ್ಥಾನಗಳಿಗೆ ನಡೆಯಲಿರುವ ಉಪಚುನಾವಣೆಗೆ ಬಿಜೆಪಿ ತನ್ನ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ. ರಾಜಸ್ಥಾನದ ಚೋರಾಸಿ ಕ್ಷೇತ್ರದಿಂದ ಕರಿಲಾಲ್ ನನೋಮಾ, ಗಾಜಿಯಾಬಾದ್ ಕ್ಷೇತ್ರದಿಂದ ಸಂಜೀವ್ ಶರ್ಮಾ, ಮಜಾವಾನ್ ನಿಂದ ಸುಚಿಸ್ಮಿತಾ ಮೌರ್ಯ ಮತ್ತು ಉತ್ತರ ಪ್ರದೇಶದ ಫುಲ್ ಪುರ್ ವಿಧಾನಸಭಾ ಕ್ಷೇತ್ರದಿಂದ ದೀಪಕ್ ಪಟೇಲ್ ಅವರನ್ನು ಪಕ್ಷ ಕಣಕ್ಕಿಳಿಸಿದೆ. ಬಿಜೆಪಿ ಕೇಂದ್ರ ಚುನಾವಣಾ ಸಮಿತಿ ಅಭ್ಯರ್ಥಿಗಳ ಹೆಸರನ್ನು ಅಂತಿಮಗೊಳಿಸಿದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು ಇದೇ ೨೭ ರಂದು ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳ ಜನರೊಂದಿಗೆ ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೆಡಿಯೊ ಕಾರ್ಯಕ್ರಮದ ೧೧೫ ನೇ ಆವೃತ್ತಿಯಾಗಿದೆ. ಟೋಲ್ ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಜನರು ಕಾರ್ಯಕ್ರಮಕ್ಕೆ ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ಸಲ್ಲಿಸಬಹುದು. ಜನರು ತಮ್ಮ ಸಲಹೆಗಳನ್ನು ನರೇಂದ್ರ ಮೋದಿ ಅಪ್ಲಿಕೇಶನ್ ಅಥವಾ ಮೈಗೌ ಓಪನ್ ಫೋರಂ ಮೂಲಕ ಆನ್ ಲೈನ್ ನಲ್ಲಿ ಹಂಚಿಕೊಳ್ಳಬಹುದು. ಮುಂಬರುವ ಸಂಚಿಕೆಯ ಸಲಹೆಗಳನ್ನು ನಾಳೆಯವರೆಗೆ ಸ್ವೀಕರಿಸಲಾಗುತ್ತದೆ.

<><*<><>*><>

ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಎರಡನೇ ಟೆಸ್ಟ್ ಕ್ರಿಕೆಟ್ ಪಂದ್ಯ ಪುಣೆಯಲ್ಲಿ ಇಂದು ಆರಂಭವಾಗಿದೆ. ಟಾಸ್ ಗೆದ್ದು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ನ್ಯೂಜಿಲೆಂಡ್, ಇತ್ತೀಚಿನ ವರದಿ ಬಂದಾಗ ೩ ವಿಕೆಟ್ ನಷ್ಟಕ್ಕೆ ೧೪೪ ರನ್ ಗಳಿಸಿ ಆಡುತ್ತಿದೆ. ಹಿಂದಿನ ಪಂದ್ಯದಲ್ಲಿ ಕಳಪೆ ಪ್ರದರ್ಶನ ನೀಡಿದ್ದ ಬ್ಯಾಟರ್ ಕೆ.ಎಲ್. ರಾಹುಲ್, ಕುಲ್ದೀಪ್ ಯಾದವ್ ಮತ್ತು ವೇಗಿ ಮೊಹಮ್ಮದ್ ಸಿರಾಜ್ ಅವರನ್ನು ಭಾರತ ತಂಡ, ಆಡುವ ಹನ್ನೊಂದರ ಬಳಗದಿಂದ ಕೈಬಿಟ್ಟಿದೆ. ಇವರ ಬದಲಿಗೆ ಶುಬ್ಮನ್ ಗಿಲ್, ಆಕಾಶ್ ದೀಪ್ ಮತ್ತು ವಾಷಿಂಗ್ಟನ್ ಸುಂದರ್ ಗೆ ಸ್ಥಾನ ಕಲ್ಪಿಸಲಾಗಿದೆ.

<><*<><>*><>

ಭಾರತ ಮತ್ತು ನ್ಯೂಜಿಲೆಂಡ್ ಮಹಿಳಾ ತಂಡಗಳ ನಡುವಿನ ಮೂರು ಪಂದ್ಯಗಳ ಏಕದಿನ ಸರಣಿಯ ಆರಂಭಿಕ ಪಂದ್ಯ ಇಂದು ಗುಜರಾತ್ ನ ಅಹಮದಾಬಾದ್ ನಲ್ಲಿ ನಡೆಯಲಿದೆ. ಪಂದ್ಯ ಮಧ್ಯಾಹ್ನ ೧.೩೦ಕ್ಕೆ ಆರಂಭವಾಗಲಿದೆ. ಇತ್ತೀಚೆಗೆ ನಡೆದ ಟಿ೨೦ ವಿಶ್ವಕಪ್ ಟೂರ್ನಿಯಲ್ಲಿ ಗುಂಪು ಹಂತದಲ್ಲೇ ಹೊರಬಿದ್ದ ಹರ್ಮನ್ ಪ್ರೀತ್ ಕೌರ್ ಬಳಗ, ಈ ಸರಣಿಯೊಂದಿಗೆ ಮುಂದಿನ ವರ್ಷ ನಡೆಯಲಿರುವ ಏಕದಿನ ವಿಶ್ವಕಪ್ ಗೆ ಸಿದ್ಧತೆ ಆರಂಭಿಸಲಿದೆ.

<><*<><>*><>

ಭಾರತ ಮತ್ತು ಜರ್ಮನಿ ನಡುವಿನ ಎರಡನೇ ಅಂತಾರಾಷ್ಟ್ರೀಯ ಹಾಕಿ ಪಂದ್ಯ ನವದೆಹಲಿಯ ಮೇಜರ್ ಧ್ಯಾನ್ ಚಂದ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿದೆ. ಪಂದ್ಯ ಮಧ್ಯಾಹ್ನ ೨ ಗಂಟೆಗೆ ಆರಂಭವಾಗಲಿದೆ.

<><*<><>*><>

ಇದೇ ೨೮ ಸೋಮರಾರದಿಂದ ಆಕಾಶವಾಣಿ ಧಾರವಾಡ ಕೇಂದ್ರದ ಸಹ ಪ್ರಸಾರದಲ್ಲಿ ಮಧ್ಯಾಹ್ನ ೧೨ ಗಂಟೆಗೆ ೫ ನಿಮಿಷಗಳ ಕಾಲ ಪ್ರದೇಶ ಸಮಾಚಾರ ಮೂಡಿಬರಲಿದೆ. ರಾಜ್ಯದ ಎಲ್ಲಾ ಬಾನುಲಿ ಕೇಂದ್ರಗಳಿಂದಲೂ ಈ ವಾರ್ತಾ ಪ್ರಸಾರ ಏಕಕಾಲಕ್ಕೆ ಪ್ರಸಾರವಾಗಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**